# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

**ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್) : ಯು40109ಕೆಎ1999ಎಸ್‌ಜಿ025521**

## ಅಧಿಸೂಚನೆ – ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಣೆ

**ಸಂಖ್ಯೆ: ಕವಿಪ್ರನಿನಿ/ಬಿ16/44953/2023–24** **ದಿನಾಂಕ:** – 6 AUG 2025

**ವಿಷಯ:** ಕಿರಿಯ ಸ್ಟೇಷನ್ ಪರಿಚಾರಕ (ಎನ್.ಕೆ.ಕೆ) ಮತ್ತು ಕಿರಿಯ ಪವರ್‌ಮ್ಯಾನ್ (ಎನ್.ಕೆ.ಕೆ) ಹುದ್ದೆಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸುವ ಬಗ್ಗೆ.

**ಉಲ್ಲೇಖ:**
1. ನಿಗಮದ ಉದ್ಯೋಗ ಪ್ರಕಟಣೆ ಸಂಖ್ಯೆ: ಕವಿಪ್ರನಿನಿ/ಬಿ16/44953/2023–24 (ಎನ್.ಕೆ.ಕೆ), ದಿನಾಂಕ: 14.10.2024.
2. ದಾಖಲಾತಿ ಪರಿಶೀಲನೆಗೆ ಹೊರಡಿಸಲಾದ ಅಧಿಸೂಚನೆ ಸಂಖ್ಯೆ: ಕವಿಪ್ರನಿನಿ/ಬಿ16/ 44953/2023–24(DV), ದಿನಾಂಕ: 25.02.2025 ಮತ್ತು 10.03.2025.
3. ಸಹನ ಶಕ್ತಿ ಪರೀಕ್ಷೆ ಅಧಿಸೂಚನೆ ಸಂಖ್ಯೆ: ಕವಿಪ್ರನಿನಿ/ಬಿ16/44953/2023–24, ದಿನಾಂಕ: 23.04.2025.

*****

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ಉದ್ಯೋಗ ಪ್ರಕಟಣೆ ಸಂಖ್ಯೆ: ಕವಿಪ್ರನಿನಿ/ಬಿ16/44953/2023–24(ಎನ್.ಕೆ.ಕೆ), ದಿನಾಂಕ: 14.10.2024 ಕ್ಕೆ ಅನುಗುಣವಾಗಿ, ನಿಗದಿಪಡಿಸಿದ ಶೈಕ್ಷಣಿಕ ವಿದ್ಯಾರ್ಹತೆಯಲ್ಲಿ (ಎಸ್.ಎಸ್.ಎಲ್.ಸಿ/10ನೇ ತರಗತಿ) ಗಳಿಸಿರುವ ಅಂಕಗಳ ಜ್ಯೇಷ್ಠತೆಯ ಆಧಾರದ ಮೇಲೆ, ದಿನಾಂಕ: 05.05.2025 ರಿಂದ 08.05.2025 ರವರೆಗೆ ಅಧಿಸೂಚಿತ ಹುದ್ದೆಗಳ 1:5 ರ ಅನುಪಾತದಲ್ಲಿ ನಡೆಸಲಾದ ಸಹನ ಶಕ್ತಿ ಪರೀಕ್ಷೆಯಲ್ಲಿ ಕಿರಿಯ ಸ್ಟೇಷನ್ ಪರಿಚಾರಕ(ಎನ್.ಕೆ.ಕೆ) ಮತ್ತು ಕಿರಿಯ ಪವರ್‌ಮ್ಯಾನ್(ಎನ್.ಕೆ.ಕೆ) ಹುದ್ದೆಗಳಿಗೆ ಅರ್ಹರಾದ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಕಟ್–ಆಫ್ (Cut-off) ಅಂಕಗಳೊಂದಿಗೆ ಕವಿಪ್ರನಿನಿ ಅಂತರ್ಜಾಲ **https://kptcl.karnataka.gov.in/Recruitment** ದಲ್ಲಿ, ಈ ಮೂಲಕ ಪ್ರಕಟಿಸಲಾಗಿದೆ.

ಸದರಿ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಸಮಂಜಸವಾದ ಆಕ್ಷೇಪಣೆಗಳಿದ್ದಲ್ಲಿ, ಸಹನ ಶಕ್ತಿ ಪರೀಕ್ಷೆಯಲ್ಲಿ ಅರ್ಹತೆ ಹೊಂದಿದ್ದ ಅಭ್ಯರ್ಥಿಗಳು ಮಾತ್ರ ಸೂಕ್ತ ವಿವರ ಹಾಗೂ ದಾಖಲಾತಿಗಳೊಂದಿಗೆ, ವಿಷಯಸೂಚಿಯಲ್ಲಿ **'ಕಿರಿಯ ಸ್ಟೇಷನ್ ಪರಿಚಾರಕ (ಎನ್.ಕೆ.ಕೆ)/ಕಿರಿಯ ಪವರ್‌ಮ್ಯಾನ್ (ಎನ್.ಕೆ.ಕೆ) – ತಾತ್ಕಾಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಣೆ'** ಎಂದು ಕಡ್ಡಾಯವಾಗಿ ನಮೂದಿಸಿ, ತಮ್ಮ ಹೆಸರು ಹಾಗೂ ಅರ್ಜಿ ಸಂಖ್ಯೆಯೊಂದಿಗೆ ಖುದ್ದಾಗಿ **ನಿರ್ದೇಶಕರು (ಆಡಳಿತ ಮತ್ತು ಮಾಸಂ), ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು–560009** ಇವರಿಗೆ ಸಲ್ಲಿಸುವುದು. ಆಕ್ಷೇಪಣೆಗಳನ್ನು **ದಿನಾಂಕ: 16.08.2025 ರ ಸಂಜೆ 05:30 ರವರೆಗೆ** ಮಾತ್ರ ಸಲ್ಲಿಸಬಹುದಾಗಿರುತ್ತದೆ.

**ನಿಗದಿತ ದಿನಾಂಕದ ನಂತರ ಸಲ್ಲಿಸಲಾಗುವ ಆಕ್ಷೇಪಣೆಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ.**

ಈ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯದಲ್ಲಿ ಇತ್ಯರ್ಥಕ್ಕಾಗಿ ಬಾಕಿ ಉಳಿದಿರುವ ರಿಟ್ ಅರ್ಜಿ ಸಂಖ್ಯೆ: 200882/2025 ರಲ್ಲಿನ ಅಂತಿಮ ತೀರ್ಪಿಗೊಳಪಟ್ಟು ಪ್ರಕಟಿಸಲಾಗಿದೆ.

**ನಿರ್ದೇಶಕರು**
**(ಆಡಳಿತ ಮತ್ತು ಮಾನವ ಸಂಪನ್ಮೂಲ)**
**ನಿಗಮ ಕಾರ್ಯಾಲಯ, ಕವಿಪ್ರನಿನಿ,**
**ಕಾವೇರಿ ಭವನ, ಬೆಂಗಳೂರು.**